(3) Addnl. Sections in Un Aided Schools 19/6/99.

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ :- ಖಾಸಗಿ ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಹೆಚ್ಚುವರಿ ವಿಭಾಗಗಳನ್ನು ಮಂಜೂರು ಮಾಡುವ ಬಗ್ಗೆ.

ಓದಲಾಗಿದೆ :- ನಿರ್ದೇಶಕರು (ಪ್ರೌಢ ಶಿಕ್ಷಣ), ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರ ಪತ್ರ ಸಂ:ಸಿ8(8)-ಶಾಶಿಅ-ಅಧಿಕ ವಿಭಾಗ : ತೆರೆ : ಅನು: 98-99, ದಿ:27-8-1998.

oooo

<u>ಪ್ರಸ್ತಾವನೆ</u> :-

ನಿರ್ದೇಶಕರು, ಪ್ರೌಢ ಶಿಕ್ಷಣ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು, ಇವರು ಓದಲಾದ ದಿನಾಂಕ:27ನೇ ಆಗಸ್ಟ್, 1998ರ ಪತ್ರದಲ್ಲಿ ಶಾಶ್ವತ ಅನುದಾನ ರಹಿತ ಶಾಲೆಗಳ ಆಡಳಿತ ಮಂಡಳಿಯವರು ತಮ್ಮ ಶಾಲೆಗಳಲ್ಲಿ ಶಾಶ್ವತ ಅನುದಾನ ರಹಿತವಾಗಿ ಅಧಿಕ ವಿಭಾಗಗಳನ್ನು ತೆರೆಯುವ ಬಗೆಗೆ ಸರ್ಕಾರದ ಅನುಮತಿಯನ್ನು ಕೋರಿರುತ್ತಾರೆ ಎಂದು ತಿಳಿಸಿ ಈ ಬಗ್ಗೆ ಸರ್ಕಾರದ ಆದೇಶವನ್ನು ಕೋರಿರುತ್ತಾರೆ.

ಖಾಸಗಿ ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಹೆಚ್ಚುವರಿ ವಿಭಾಗಗಳನ್ನು ಮಂಜೂರು ಮಾಡುವ ಬಗ್ಗೆ ಕಾಲಕಾಲಕ್ಕೆ ಸೂಚನೆಗಳನ್ನು ನೀಡಲಾಗಿದೆ. ಈ ವಿಚಾರದ ಬಗ್ಗೆ ಸಮಗ್ರ ನೀತಿಯೊಂದನ್ನು ರೂಪಿಸುವ ಅಗತ್ಯತೆಯನ್ನು ಸರ್ಕಾರ ಮನಗಂಡಿದೆ. ಈ ಸಂಬಂಧದಲ್ಲಿ ಸರ್ವೋಚ್ಚ ನ್ಯಾಯಾಲಯವು ಉನ್ನಿಕೃಷ್ಣನ್.ಜೆ.ಪಿ. ವಿರುದ್ಧ ಆಂಧ್ರ ಪ್ರದೇಶ ಸರ್ಕಾರ 1993(1) ಎಸ್‌ಸಿಸಿ 645 ಈ ಪ್ರಕರಣದಲ್ಲಿ ನೀಡಿರುವ ತೀರ್ಪಿನಲ್ಲಿ "14 ವರ್ಷ ವಯೋಮಿತಿಯೊಳಗಿನ ಮಕ್ಕಳಿಗೆ ಉಚಿತ ಶಿಕ್ಷಣದ ಸಂವಿಧಾನಾತ್ಮಕ ಹಕ್ಕನ್ನು ಎತ್ತಿ ಹಿಡಿದು ಉಚಿತ ಮತ್ತು ಕಡ್ಡಾಯ ಪ್ರಾಥಮಿಕ ಶಿಕ್ಷಣ ಒದಗಿಸುವುದು ರಾಜ್ಯ ಸರ್ಕಾರದ ಜವಾಬ್ದಾರಿಯಾಗಿದ್ದು, ಖಾಸಗಿ ಶಿಕ್ಷಣ ಸಂಸ್ಥೆಗಳು ಹಾಗೂ ಸ್ವಯಂ ಸೇವಾ ಸಂಸ್ಥೆಗಳ ಮೂಲಕ ಸಹ ಸದರಿ ಶಿಕ್ಷಣವನ್ನು ಒದಗಿಸಬಹುದಾದುದನ್ನು ಹಾಗೂ ಖಾಸಗಿ ಶಿಕ್ಷಣ ಸಂಸ್ಥೆಗಳು ಸಹ ಶಿಕ್ಷಣವನ್ನು ಒದಗಿಸುವ ಪ್ರಮುಖ ಪಾತ್ರವನ್ನು ವಹಿಸುತ್ತಿರುವುದನ್ನು ಹಾಗೂ ರಾಜ್ಯ ಸರ್ಕಾರವು ನಡೆಸುವ ಶಾಲೆಗಳಿಗೆ ತಮ್ಮ ಮಕ್ಕಳನ್ನು ಕಳುಹಿಸಲು ಬಯಸದಿರುವ ಪೋಷಕರ ಮಕ್ಕಳ ಶೈಕ್ಷಣಿಕ ಅಗತ್ಯತೆಯನ್ನು ಪೂರೈಸುತ್ತವೆ" ಎಂಬ ಅಂಶಗಳನ್ನು ಎತ್ತಿ ಹಿಡಿದಿರುವುದನ್ನು ಸಹ ಗಮನದಲ್ಲಿರಿಸಿಕೊಂಡು ರಾಜ್ಯದ ಶಿಕ್ಷಣ ಸಂಸ್ಥೆಗಳು ಸ್ವಪ್ರೇರಣೆಯಿಂದ ತಮ್ಮ ಶಾಲೆಗಳಲ್ಲಿ ಹೆಚ್ಚುವರಿ ವಿಭಾಗಗಳನ್ನು ಶಾಶ್ವತ ಅನುದಾನ ರಹಿತವಾಗಿ ತೆರೆಯಲು ಮುಂದೆ ಬಂದಲ್ಲಿ ಮತ್ತು ಶಿಕ್ಷಣ ಅಧಿನಿಯಮ ಮತ್ತು ನಿಯಮಗಳ ಉಪಬಂಧಗಳ ಎಲ್ಲಾ ಷರತ್ತುಗಳನ್ನು ಪೂರೈಸಿ ಮೂಲ ಸೌಲಭ್ಯಗಳನ್ನು ಒದಗಿಸಿ ಶಾಲೆಗಳನ್ನು ನಡೆಸಲು ಮುಂದೆ ಬಂದಲ್ಲಿ, ಪೋಷಕರಿಗೆ ಹಾಗೂ ಮಕ್ಕಳಿಗೆ ಹೆಚ್ಚಿನ ಆಯ್ಕೆ ಸ್ವಾತಂತ್ರ್ಯ ನೀಡುವ ಉದ್ದೇಶದಿಂದ ಹಾಲಿ ಇರುವ ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಶಾಶ್ವತ ಅನುದಾನರಹಿತ ಷರತ್ತಿನ ಮೇಲೆ ಹಾಗೂ ಶಿಕ್ಷಣ ಅಧಿನಿಯಮ ಮತ್ತು ನಿಯಮಗಳ ಉಪಬಂಧಗಳ ಎಲ್ಲಾ ಷರತ್ತುಗಳನ್ನು ಪೂರೈಸುವ ಷರತ್ತಿನ ಮೇಲೆ ಹೆಚ್ಚುವರಿ ವಿಭಾಗಗಳನ್ನು ತೆರೆಯುವ ಬಗ್ಗೆ ಈ ಕೆಳಕಂಡ ಆದೇಶಗಳನ್ನು ಹೊರಡಿಸಲಾಗಿದೆ :-

<u>ಸರ್ಕಾರದ ಆದೇಶ ಸಂಖ್ಯೆ: ಇಡಿ 19 ಎಸ್‌ಇಎಸ್ 96, ಬೆಂಗಳೂರು, ದಿನಾಂಕ:13-6-1999.</u>

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈಗಾಗಲೇ ರಾಜ್ಯದಲ್ಲಿನ ಶೈಕ್ಷಣಿಕ ಅಗತ್ಯತೆಯನ್ನು ಪೂರೈಸಲು ಸಾಕಾಗುವಷ್ಟು ಸಂಖ್ಯೆಯಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳು ರಾಜ್ಯದಲ್ಲಿ ಅಸ್ತಿತ್ವದಲ್ಲಿದ್ದರೂ ಮತ್ತು ಇವುಗಳು ರಾಜ್ಯದ ಎಲ್ಲಾ ಮಕ್ಕಳ ಶೈಕ್ಷಣಿಕ ಅಗತ್ಯತೆಯನ್ನು

....ಪುಟ-2ಕ್ಕೆ...

ಪೂರೈಸುತ್ತಿದ್ದರೂ ಹಾಗೂ ಈ ಶಿಸ್ತಿನಲ್ಲಿ ಅಧಿಕ ವಿಭಾಗಗಳ ಅವಶ್ಯಕತೆ ಕಂಡು ಬರುತ್ತಿದ್ದರೂ ಸಹ ಪೋಷಕರಿಗೆ ಹಾಗೂ ಮಕ್ಕಳಿಗೆ ಹೆಚ್ಚಿನ ಅಂದರೆ ಸಾಧ್ಯತೆ ನಿಲುವ ಉದ್ದೇಶದಿಂದ ಹಾಗೂ ಸ್ವಯಂಪ್ರೇರಣೆಯಿಂದ ಶಾಶ್ವತ ಅನುದಾನ ರಹಿತ ಷರತ್ತಿನ ಮೇಲೆ ಹೆಚ್ಚುವರಿ ವಿಭಾಗಗಳನ್ನು ತೆರೆಯಲು ಮುಂದೆ ಬರುವ ಅನುದಾನ ರಹಿತ ಶಿಕ್ಷಣ ಸಂಸ್ಥೆಗಳಿಗೆ ಈ ಕೆಳಕಂಡ ಷರತ್ತುಗಳಿಗೊಳಪಡಿಸಿ ಹೆಚ್ಚುವರಿ ವಿಭಾಗಗಳನ್ನು ಮಂಜೂರು ಮಾಡಲು ಆದೇಶಿಸಲಾಗಿದೆ:-

-:: <u>ಷರತ್ತುಗಳು</u> ::-

1) ಶಾಶ್ವತ ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಹೆಚ್ಚುವರಿ ವಿಭಾಗಗಳನ್ನು ಮಂಜೂರು ಮಾಡುವ ಅಧಿಕಾರವನ್ನು ನಿರ್ದೇಶಕರು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಇವರಿಗೆ ಅನುಕ್ರಮವಾಗಿ ನೀಡಲಾಗಿದೆ ಹಾಗೂ ಈ ಬಗ್ಗೆ ಆದೇಶಗಳನ್ನು ಸದರಿ ಅಧಿಕಾರಿಗಳೇ ಹೊರಡಿಸತಕ್ಕದ್ದು;

2) ಇಂತಹ ಮಂಜೂರಾತಿಯು ಶಾಶ್ವತ ಅನುದಾನ ರಹಿತವಾಗಿರತಕ್ಕದ್ದು. ಆಡಳಿತ ಮಂಡಳಿಗಳು ಮುಂದೆ ಯಾವುದೇ ಸಂದರ್ಭದಲ್ಲಿ ಅನುದಾನವನ್ನು ಕೇಳಿ ಬೇಡಿಕೆಯನ್ನು ಸಲ್ಲಿಸತಕ್ಕದ್ದಲ್ಲ;

3) ಇಂತಹ ಮಂಜೂರಾತಿಯಿಂದ ಯಾವುದೇ ರೀತಿಯ ಅನಾರೋಗ್ಯದ ಸ್ಪರ್ಧೆ ಉಂಟಾಗಬಾರದು ಹಾಗೂ ಈಗಾಗಲೇ ಅಸ್ತಿತ್ವದಲ್ಲಿರುವ ಸುತ್ತಮುತ್ತಲಿನ ಶಾಲೆಗಳ ಬೆಳವಣಿಗೆ ಹಾಗೂ ಅಭಿವೃದ್ಧಿಗೆ ಧಕ್ಕೆ ಉಂಟಾಗಬಾರದು ಮತ್ತು ಈ ಬಗ್ಗೆ ಹೆಚ್ಚುವರಿ ವಿಭಾಗಗಳ ಸಂಬಂಧದಲ್ಲಿ ನೆರೆಹೊರೆಯ ಶಾಲೆಗಳಿಂದ ಅಥವಾ ಪೋಷಕರಿಂದ ಆಕ್ಷೇಪಣೆಗಳು ಬಂದಲ್ಲಿ ಅವುಗಳನ್ನು ಸಹ ಪರಿಗಣಿಸಿ ಸೂಕ್ತ ನಿರ್ಧಾರ ತೆಗೆದುಕೊಳ್ಳತಕ್ಕದ್ದು.

4) ಸಂಬಂಧಪಟ್ಟ ಆಡಳಿತ ಮಂಡಳಿಗಳು ಶಿಕ್ಷಣ ಅಧಿನಿಯಮ ಹಾಗೂ ನಿಯಮಗಳ ಉಪಬಂಧಗಳ ಎಲ್ಲಾ ಷರತ್ತುಗಳನ್ನು ಮತ್ತು ಸೂಚನೆಗಳನ್ನು ಪೂರೈಸಿರಬೇಕು;

5) ತರಬೇತಿ ಹೊಂದಿದ ಅರ್ಹ ವಿದ್ಯಾರ್ಹತೆಯುಳ್ಳ ಶಿಕ್ಷಕರುಗಳನ್ನು ನೇಮಿಸಿಕೊಳ್ಳಬೇಕು;

6) ಪೀಠೋಪಕರಣ ಮತ್ತು ಪಾಠೋಪಕರಣ ಹಾಗೂ ಸಾಕಷ್ಟು ಕೊಠಡಿಗಳ ವ್ಯವಸ್ಥೆಯನ್ನು ಹೊಂದಿರಬೇಕು;

7) ಇಲಾಖೆಯ ಅನುಮತಿ ಇಲ್ಲದೆ ಹೆಚ್ಚುವರಿ ವಿಭಾಗಗಳನ್ನು ತೆರೆಯಬಾರದು;

8) ವಿದ್ಯಾರ್ಥಿಗಳ ಸಂಖ್ಯೆ ನಿಯಮಾನುಸಾರ ನಿರ್ದಿಷ್ಟ ಸಂಖ್ಯೆಯಲ್ಲಿರಬೇಕು;

9) ಮಂಜೂರಾತಿ ನೀಡಿರುವ ಮಾಧ್ಯಮದಲ್ಲಿಯೇ ತರಗತಿಯನ್ನು ತೆರೆಯತಕ್ಕದ್ದು;

10) ನಿಯಮಾವಳಿ ಪ್ರಕಾರ ಫೀ ಶುಲ್ಕವನ್ನು ವಸೂಲು ಮಾಡತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,
(ಸಹಿ)-
(ಬಿ. ಸುರೇಂದ್ರನಾಥ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಶಿಕ್ಷಣ ಇಲಾಖೆ.

** ನಕಲು **

ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ, ಬೆಂಗಳೂರು-1

ಸಂಖ್ಯೆ: ಸಿ8(3)-ಶಾಶಿ-ಅಧಿಕ ವಿಭಾಗ-ತರೆ-ಅನು-3:98-99 ದಿನಾಂಕ: 15ನೇ ಜುಲೈ, 1999

<u>ಜ್ಞಾಪನ</u>

ಮೇಲ್ಕಂಡ ಸರ್ಕಾರಿ ಆದೇಶ ಸಂಖ್ಯೆ: ಇಡಿ 19 ಎಸ್‌ಎಲ್‌ಬಿ 98, ಬೆಂಗಳೂರು, ದಿನಾಂಕ: 15-6-1999ರ ಸರ್ಕಾರಿ ಆದೇಶವನ್ನು ಪ್ರತಿ ಮುಂದಿನ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.

ನಿರ್ದೇಶಕರು (ಪ್ರಾಥಮಿಕ ಶಿಕ್ಷಣ)

<u>ಪ್ರತಿಗಳನ್ನು</u>:-

1) ರಾಜ್ಯದ ಎಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆಯ ಎಲ್ಲಾ ವಿಭಾಗೀಯ ಸಹನಿರ್ದೇಶಕರುಗಳಿಗೆ;
2) ರಾಜ್ಯದ ಎಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರುಗಳಿಗೆ ಮತ್ತು, ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳ ಗಮನಕ್ಕೆ ತರಲು ತಿಳಿಸಿದೆ.
3) ಸಂಬಂಧಿಸಿದ ಶಾಖೆಯ ಎಲ್ಲಾ ಸಿಬ್ಬಂದಿವರ್ಗದವರುಗಳ ಮಾಹಿತಿಗಾಗಿ;
4) ಕಛೇರಿ ಪ್ರತಿ.

ಮೆಮೊ: ಬಿಡುಗಡೆ: 15071999.